ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	721
ಸದಸ್ಯರ ಹೆಸರು	:	ಶ್ರೀ ಕೆ.ಗೋವಿಂದರಾಜ್
ಉತ್ತರಿಸಬೇಕಾದ ದಿನಾಂಕ	:	12.03.2020
ಉತ್ತರಿಸುವ ಸಚಿವರು	:	ಗೃಹ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ತೀವ್ರ ಸಂಚಾರ ದಟ್ಟಣೆಯಿಂದ ಸಾರ್ವಜನಿಕರಿಗೆ ಸಮಸ್ಯೆ ತಂದೊಡ್ಡುವುದಲ್ಲದೆ, ಅವರ ಸಮಯವನ್ನು ಹಾಳು ಮಾಡುವ ವಿಶ್ವದ ಅಗ್ರ 10 ನಗರಗಳ ಪಟ್ಟಿಯಲ್ಲಿ ಬೆಂಗಳೂರು ಪ್ರಥಮ ಸ್ಥಾನದಲ್ಲಿರುವುದಾಗಿ ಇತ್ತೀಚಿನ ಸಮೀಕ್ಷೆಯೊಂದು ಹೇಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಹೌದು.</td></tr>
<tr><td>(ಆ)</td><td>ಬಂದಿದ್ದಲ್ಲಿ, ಈ ಆತಂಕಕಾರಿ ಸಮಸ್ಯೆಗೆ ಕಾರಣಗಳೇನು;</td><td>ಬೆಂಗಳೂರು ನಗರ ಎದುರಿಸುತ್ತಿರುವ ಸಂಚಾರ ದಟ್ಟಣೆಗೆ ಕಾರಣಗಳು ಕೆಳಕಂಡಂತಿವೆ:–
ಅ) ಬೆಂಗಳೂರು ಮಹಾನಗರವು ದಿನೇ ದಿನೇ ಬೆಳೆಯುತ್ತಿದ್ದು, ಜನಸಂಖ್ಯೆಯು 2020ರ ಹೊತ್ತಿಗೆ 1 ಕೋಟಿ 30 ಲಕ್ಷ ಮೀರಿದೆ.
ಆ) ಲಭ್ಯವಿರುವ ರಸ್ತೆಗಳಲ್ಲಿ ಅಗಲೀಕರಣವಾಗಲೀ, ಇತರ ರೀತಿಯ ಉನ್ನತೀಕರಣಕ್ಕೆ ಪರ್ಯಾಯ ಮಾರ್ಗಗಳಿಲ್ಲದೆ ಸುಗಮ ಸಂಚಾರ ವ್ಯವಸ್ಥೆಗೆ ಅವಕಾಶವಿಲ್ಲವಾಗಿದೆ.
ಇ) ಬೆಂಗಳೂರು ನಗರದಲ್ಲಿ ಹಾಲಿ ನಡೆಯುತ್ತಿರುವ ವೈಟ್‌ಟಾಪಿಂಗ್, ಟೆಂಡರ್ ಶ್ಯೂರ್, ಸ್ಮಾರ್ಟ್ ಸಿಟಿ, ಬಿ.ಎಂ.ಆರ್.ಸಿ.ಎಲ್, ಬಿ.ಡಬ್ಲ್ಯೂ.ಎಸ್.ಎಸ್.ಬಿ ಕಾಮಗಾರಿಗಳಿಂದಾಗಿ ಪ್ರಮುಖ ರಸ್ತೆಗಳಲ್ಲಿ ವಾಹನ ಸಂಚಾರಕ್ಕೆ ನಿರ್ಬಂಧವಿದೆ.</td></tr>
<tr><td>(ಇ)</td><td>ಬೆಂಗಳೂರು ಎದುರಿಸುತ್ತಿರುವ ತೀವ್ರವಾದ ಈ ಸಂಚಾರ ದಟ್ಟಣೆ ಸಮಸ್ಯೆ ಪರಿಹಾರಕ್ಕಾಗಿ ಸರ್ಕಾರ ಕೈಗೊಂಡಿರುವ ಅಥವಾ ಕೈಗೊಳ್ಳಲಾಗುವ ದೀರ್ಘಾವಧಿ ಪರಿಹಾರಗಳೇನು?</td><td>ಬೆಂಗಳೂರು ಎದುರಿಸುತ್ತಿರುವ ಸಂಚಾರ ದಟ್ಟಣೆ ಸಮಸ್ಯೆ ಪರಿಹಾರಕ್ಕಾಗಿ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:–
(ಅ)<u>ಹೈ ಡೆನ್ಸಿಟಿ ಕಾರಿಡಾರ್ ರಸ್ತೆಗಳ ನಿರ್ಮಾಣ</u>
ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಸಂಚಾರ ವ್ಯವಸ್ಥೆಯನ್ನು ಉತ್ತಮ ಪಡಿಸುವಹ ಸಲುವಾಗಿ ನಗರ ವ್ಯಾಪ್ತಿಯಲ್ಲಿ ಈ ಕೆಳಕಂಡ 12 ಹೆಚ್ಚು ವಾಹನ ದಟ್ಟಣೆ ಕಾರಿಡಾರರ್ ಗಳನ್ನು ಗುರುತಿಸಲಾಗಿದೆ:
<table>
<tr><td>1.</td><td>ಬಳ್ಳಾರಿ ರಸ್ತೆ</td><td>–</td><td><u>ಚಾಲುಕ್ಯ ವೃತ್ತದಿಂದ ಹೆಬ್ಬಾಳದವರೆಗೆ</u>
ವಿಂಡ್ಸರ್ ಮ್ಯಾನರ್ ಜಂಕ್ಷನ್ – ರಮಣ ಮಹರ್ಷಿ ರಸ್ತೆ – ಮೇಖ್ರಿ ವೃತ್ತದ ಮಾರ್ಗವಾಗಿ</td></tr>
<tr><td>2</td><td>ಹಳೇ ಮದ್ರಾಸ್ ರಸ್ತೆ</td><td>–</td><td><u>ಟ್ರಿನಿಟಿ ವೃತ್ತದಿಂದ ಕೆ.ಆರ್. ಪುರಂ ವರೆಗೆ</u>
ಹಲಸೂರು ಕೆರೆ – ಹಳೆ ಮದ್ರಾಸ್ ರಸ್ತೆ ಮತ್ತು ಬೆನ್ನಿಗಾನಹಳ್ಳಿ ಹಾಗೂ</td></tr>
</table></td></tr>
</table>

					ಕೆ.ಆರ್. ಪುರಂನಿಂದ ರಾಷ್ಟ್ರೀಯ ಹೆದ್ದಾರಿ 648 ವರೆಗೆ ಹೂಡಿ – ಐಟಿಪಿಎಲ್ ಮತ್ತು ಹೋಫ್ ಫಾರಂ ಮಾರ್ಗವಾಗಿ
		3	ಹಳೇ ಏರ್‌ಪೋರ್ಟ್ ರಸ್ತೆ	–	**ಎ.ಎಸ್.ಸಿ ಸೆಂಟರ್ ನಿಂದ ಕಾಡುಗೋಡಿ ವರೆಗೆ** ದೊಮ್ಮಲೂರು – ಮಾರತ್‌ಹಳ್ಳಿ – ಕುಂದಲಹಳ್ಳಿ – ವರ್ತೂರು ಮತ್ತು ಹೋಫ್ ಫಾರಂ ಮಾರ್ಗವಾಗಿ
		4	ಸರ್ಜಾಪುರ ರಸ್ತೆ	–	**ಹೊಸೂರು ರಸ್ತೆ ಸೆಂಟ್ ಜಾನ್ಸ್ ಆಸ್ಪತ್ರೆಯಿಂದ ಬಿಬಿಎಂಪಿ ವ್ಯಾಪ್ತಿಯ ಕಾರ್ಮೆಲ್‌ರಾಂ ಬ್ರಿಡ್ಜ್‌ವರೆಗೆ** ಜಕ್ಕಸಂದ್ರ – ಇಬ್ಲೂರು – ಹರಳೂರು ಜಂಕ್ಷನ್ ಮಾರ್ಗವಾಗಿ
		5	ಹೊಸೂರು ರಸ್ತೆ	–	**ವೆಲ್ಲಾರ ಜಂಕ್ಷನ್ ನಿಂದ ಸಿಲ್ಕ್ ಬೋರ್ಡ್‌ವರೆಗೆ** ಆಡುಗೋಡಿ – ಫೋರಂ ಮಾಲ್ ಮತ್ತು ಮಡಿವಾಳ ಮಾರ್ಗವಾಗಿ
		6	ಬನ್ನೇರುಘಟ್ಟ ರಸ್ತೆ	–	**ಡೈರಿ ವೃತ್ತದಿಂದ ನೈಸ್ ರಸ್ತೆ ವರೆಗೆ** ಜಯದೇವ ಫ್ಲೈಓವರ್ – ಜೆ.ಡಿ. ಮರ ಜಂಕ್ಷನ್ – ಬಿಳೇಕಳ್ಳಿ – ಅರಕೆರೆ ಮತ್ತು ಗೊಟ್ಟಿಗೆರೆ ಮಾರ್ಗವಾಗಿ
		7	ಕನಕಪುರ ರಸ್ತೆ	–	**ಕೆ.ಆರ್. ರಸ್ತೆಯಿಂದ ನೈಸ್ ರಸ್ತೆವರೆಗೆ** ಬನಶಂಕರಿ – ಸಾರಕ್ಕಿ – ಕೋಣನಕುಂಟೆ ಮಾರ್ಗವಾಗಿ
		8	ಮೈಸೂರು ರಸ್ತೆ	–	**ಹಡ್ಸನ್ ವೃತ್ತದಿಂದ ನೈಸ್ ರಸ್ತೆವರೆಗೆ** ಟೌನ್‌ಹಾಲ್ – ಸ್ಯಾಟಲೈಟ್ ಟೌನ್ – ನಾಯಂಡಹಳ್ಳಿ – ಜ್ಞಾನಭಾರತಿ – ಆರ್.ವಿ. ಕಾಲೇಜ್ ಆಫ್ ಇಂಜಿನಿಯರಿಂಗ್ & ಕೆಂಗೇರಿ ಸ್ಯಾಟಲೈಟ್ ಟೌನ್ ಮಾರ್ಗವಾಗಿ
		9	ಮಾಗಡಿ ರಸ್ತೆ	–	**ಹಳೇ ಬಿನ್ನಿ ಮಿಲ್ ನಿಂದ ನೈಸ್ ರಸ್ತೆವರೆಗೆ** ಟೋಲ್‌ಗೇಟ್ ಜಂಕ್ಷನ್ – ಜೈಮುನಿರಾವ್ ವೃತ್ತ – ಹೌಸಿಂಗ್ ಬೋರ್ಡ್ – ಕಾಮಾಕ್ಷಿಪಾಳ್ಯ – ಹೊರವರ್ತುಲ ರಸ್ತೆ – ಶ್ರೀಗಂಧಕಾವಲ್ ಸುಂಕದಕಟ್ಟೆ ಮಾರ್ಗವಾಗಿ **ಹಾಗೂ** **ಅಂಜನ ನಗರ ಔಟರ್ ರಿಂಗ್ ರಸ್ತೆ – ಸೆಂಟ್ರಲ್ ಸಿಲ್ಕ್ ಬೋರ್ಡ್ ಜಂಕ್ಷನ್‌ನಿಂದ ಮೈಸೂರು ರಸ್ತೆ ವರೆಗೆ** ಜಯದೇವ – ಜೆ.ಡಿ. ಮರ ಜಂಕ್ಷನ್

			ಮಾರ್ಗವಾಗಿ
10	ತುಮಕೂರು ರಸ್ತೆ	–	<u>ಓಕಳಿಪುರಂನಿಂದ ಗೊರಗುಂಟೆಪಾಳ್ಯವರೆಗೆ</u> ಡಾ॥ ರಾಜ್‌ಕುಮಾರ್ ರಸ್ತೆ – ಸೋಪ್ ಫ್ಯಾಕ್ಟರಿ ಜಂಕ್ಷನ್ ಮತ್ತು ಯಶವಂತಪುರ ಮಾರ್ಗವಾಗಿ
11	ವೆಸ್ಟ್ ಆಫ್ ಕಾರ್ಡ್ ರಸ್ತೆ	–	<u>ಸೋಪ್ ಫ್ಯಾಕ್ಟರಿಯಿಂದ ಮೈಸೂರು ರಸ್ತೆವರೆಗೆ</u> ಇಸ್ಕಾನ್ – ರಾಜಾಜಿನಗರ – ಟೋಲ್‌ಗೇಟ್ ಜಂಕ್ಷನ್, ವಿಜಯನಗರ ಮತ್ತು ದೀಪಾಂಜಲಿ ಮಾರ್ಗವಾಗಿ
12	ಹೊರವರ್ತುಲ ರಸ್ತೆ	–	<u>ತುಮಕೂರು ರಸ್ತೆಯಿಂದ ತುಮಕೂರು ರಸ್ತೆವರೆಗೆ</u> ಹೆಬ್ಬಾಳ – ಕೆ.ಆರ್. ಪುರಂ – ಮಾರತ್‌ಹಳ್ಳಿ – ಇಬ್ಲೂರು, ಸೆಂಟ್ರಲ್ ಸಿಲ್ಕ್ ಬೋರ್ಡ್ – ಜೆ.ಡಿ. ಮರ ಜಂಕ್ಷನ್ – ನಾಯಂಡಹಳ್ಳಿ ಜಂಕ್ಷನ್ – ಕೊಟ್ಟಿಗೆಪಾಳ್ಯ ಜಂಕ್ಷನ್ ಮತ್ತು ಗೊರಗುಂಟೆಪಾಳ್ಯ ಮಾರ್ಗವಾಗಿ

(ಆ) <u>ಸಿ.ಬಿ.ಡಿ ಏರಿಯಾ: (ಸೆಂಟ್ರಲ್ ಬಿಸಿನೆಸ್ ಡಿಸ್ಟ್ರಿಕ್ಟ್)</u>

ಬೆಂಗಳೂರು ನಗರ ವ್ಯಾಪ್ತಿಯಲ್ಲಿ ವಿಧಾನಸೌಧದ ಸುತ್ತ 4 ಚ.ಕಿ.ಮೀ ವ್ಯಾಪ್ತಿಯನ್ನು ಸೆಂಟ್ರಲ್ ಬಿಸಿನೆಸ್ ಡಿಸ್ಟ್ರಿಕ್ಟ್ ಪ್ರದೇಶವೆಂದು ಈಗಾಗಲೇ ಘೋಷಿಸಿ ಈ ಪ್ರದೇಶದಲ್ಲಿ ಸುಗಮ ಸಂಚಾರಕ್ಕೆ ಅಭಿವೃದ್ಧಿ ಕಾರ್ಯಕೈಗೊಳ್ಳಲಾಗುತ್ತಿದೆ.

(ಇ) <u>**ಬೆಂಗಳೂರು ನಗರ ಸಂಚಾರ ಘಟಕದಿಂದ ವಾಹನ ಸಂಚಾರ ದಟ್ಟಣೆ ನಿಯಂತ್ರಿಸಲು ಕೆಳಕಂಡ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ:–**</u>

- ❖ ನಗರದ ಹಲವಾರು ಸ್ಥಳಗಳಲ್ಲಿ ಬಲ ತಿರುವು ಹಾಗೂ ಯು–ತಿರುವುಗಳನ್ನು ನಿರ್ಬಂಧಿಸಲಾಗಿದೆ.
- ❖ ಬೆಂಗಳೂರು ನಗರದ 107 ಪ್ರಮುಖ ರಸ್ತೆಗಳನ್ನು ಗುರುತಿಸಿ ಝೀರೋ ಟಾಲರೆನ್ಸ್ ರಸ್ತೆ ಗುರುತಿಸಿದೆ.
- ❖ ಎಲ್ಲಾ ರಸ್ತೆಗಳಲ್ಲಿಯೂ ಸರಕು ಸಾಗಣೆ ವಾಹನಗಳು ಬೆಳಿಗ್ಗೆ 11–00 ಗಂಟೆಯಿಂದ ಸಂಜೆ 04–00 ಗಂಟೆಯವರೆಗೆ ಹಾಗೂ ರಾತ್ರಿ 10–00 ಗಂಟೆಯಿಂದ ಬೆಳಿಗ್ಗೆ 07–00ಗಂಟೆಯವರೆಗೆ ಸಂಚರಿಸುವಂತೆ ಕ್ರಮ ವಹಿಸಿದೆ.
- ❖ ಬೆಂಗಳೂರು ನಗರದಾದ್ಯಂತ ಸಮಾನ ವೇಗಮಿತಿಯನ್ನು ಜಾರಿಗೊಳಿಸಲಾಗಿದ್ದು ಅತಿ ವೇಗವಾಗಿ ಚಲಿಸುವವರ ವಿರುದ್ಧವೂ ಸಹ ಕಟ್ಟು ನಿಟ್ಟಿನ ಕ್ರಮಗಳನ್ನು ಜರುಗಿಸಲಾಗಿದೆ.
- ❖ ಸಂಚಾರ ನಿರ್ವಹಣಾ ಕೇಂದ್ರವು (ಟಿಎಂಸಿ) ಆಧುನಿಕ ತಂತ್ರಜ್ಞಾನದಿಂದ ಕಣ್ಗಾವಲು ಕ್ಯಾಮರಾದ ಮೂಲಕ ಸಂಚಾರ

		ದಟ್ಟಣೆಯನ್ನು ನಿವಾರಿಸಲು ಕ್ರಮ ತೆಗೆದುಕೊಳ್ಳಲಾಗಿದೆ. 10 ಜಂಕ್ಷನ್‌ಗಳಲ್ಲಿ ಆರ್.ಎಲ್.ವಿ.ಡಿ (Red Light Violation Detection) ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು ಸಿಗ್ನಲ್ ಜಂಪಿಂಗ್ ಮತ್ತು ಲೇನ್ ಡಿಸಿಪ್ಲಿನ್ ಉಲ್ಲಂಘನೆಯಾಗದಂತೆ ಕ್ರಮವಹಿಸಲಾಗಿದೆ. ❖ 223 ಜನ ಗೃಹ ರಕ್ಷಕ ದಳದ ಸಿಬ್ಬಂದಿಯನ್ನು ಸಂಚಾರ ನಿಯಂತ್ರಣ ಮತ್ತು ನಿರ್ವಹಣೆಗೆ ಬಳಸಿಕೊಳ್ಳಲಾಗುತ್ತಿದೆ. ❖ ಸಾಮಾಜಿಕ ಜಾಲತಾಣಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಹಾಗೂ ಬೆಂಗಳೂರು ನಗರದ ಥಣಿಸಂದ್ರದಲ್ಲಿರುವ ಸಂಚಾರ ತರಬೇತಿ ಮತ್ತು ರಸ್ತೆ ಸುರಕ್ಷತಾ ಸಂಸ್ಥೆಯಲ್ಲಿ ಸಹ ವೃತ್ತಿಪರ ಚಾಲಕರುಗಳಿಗೆ ಹಾಗೂ ಶಾಲಾ ವಾಹನಗಳ ಚಾಲಕರಿಗೆ ವಿಶೇಷವಾದ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ತನ್ಮೂಲಕ ಅರಿವು ಮೂಡಿಸುವ ಉದ್ದೇಶವನ್ನು ಸಫಲಗೊಳಿಸಲಾಗುತ್ತಿದೆ.

ಹೆಚ್‌ಡಿ 37 ಎಸ್‌ಎಸ್‌ಟಿ 2020

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು